# <u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಬನಹಟ್ಟಿ</u>

**<u>ಸಿ.ಸಿ.ನಂ.2041/2022</u>**

1) ಯಲ್ಲಪ್ಪ ಹಣಮಂತ ನಜ್ಜರ,
ಸಾಃ ಮಹಾಲಿಂಗಪೂರ.

.....ಫಿರ್ಯಾದಿದಾರ

– ವಿರುದ್ಧ –

1) ಅಶ್ರಫ್ ದಿಲವಾರ ಉರ್ಫ್ ದಿಲವಾರಸಾಬ ಕುಂದರಗಿ,
ಸಾಃ ಮಹಾಲಿಂಗಪೂರ.

......ಆರೋಪಿ

**<u>– ಆಪಾದನೆ –</u>**

ನಾನು ಶ್ರೀಮತಿ ಶುಷ್ಮ ಟಿ.ಸಿ. ಬಿ.ಕಾಂ., ಎಲ್.ಎಲ್.ಬಿ., ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ. ದಂಡಾಧಿಕಾರಿಗಳು ಬನಹಟ್ಟಿ , ತಾ:ರಬಕವಿ-ಬನಹಟ್ಟಿ ಹೊರೆಸುವ ಆಪಾದನೆ ಏನೆಂದರೆ,

ಆರೋಪಿತರಾದ ನೀವು ಫಿರ್ಯಾದಿದಾರರಿಗೆ ಕಾನೂನುಬದ್ಧವಾಗಿ ಕೊಡಬೇಕಾಗಿದ್ದ ರೂ.7,00,000/- ಗಳ ಪಾವತಿಗಾಗಿ ನಿಮ್ಮ ಖಾತೆ ಇರುವ ಇಂಡಿಯನ್ ಬ್ಯಾಂಕ್ ಶಾಖೆ ಮಹಾಲಿಂಗಪೂರ ಬ್ಯಾಂಕಿನ ಚೆಕ್ ನಂ.089051ನ್ನು ರೂ.7,00,000/-ಗಳಿಗೆ 17-06-2022 ರ ದಿನಾಂಕ ನಮೂದಿ ಫಿರ್ಯಾದಿದಾರರಿಗೆ ನೀಡಿದ್ದು, ಅವರು ಸದರಿ ಚೆಕ್ಕನ್ನು ತಮ್ಮ ಬ್ಯಾಂಕಿನ ಮೂಲಕ ನಗದೀಕರಿಸಲು ಹಾಕಿದಾಗ ನಿಮ್ಮ ಬ್ಯಾಂಕಿನವರು"**FUNDS INSUFFICIENT**" ಎನ್ನುವ ಹಿಂಬರಹದೊಂದಿಗೆ ದಿನಾಂಕ 20-06-2022 ರಂದು ಸದರಿ ಚೆಕ್ಕು ನಗದೀಕರಣವಾಗದೇ ವಾಪಸ್ಸು ಬಂದಿದ್ದು, ಆ ಬಗ್ಗೆ ಫಿರ್ಯಾದಿದಾರರು ತಮ್ಮ ವಕೀಲರ ಮೂಲಕ ನಿಮಗೆ ದಿನಾಂಕ 08-07-2022 ರಂದು ಲೀಗಲ್ ನೋಟೀಸನ್ನು ನೀಡಿದ್ದು, ಸದರಿ ನೋಟೀಸ್ ನಿಮಗೆ ದಿನಾಂಕ 11-07-2022 ರಂದು ಜಾರಿಯಾಗಿ ನಂತರ 15 ದಿನಗಳು ಕಳೆದರೂ ಸಹ ನೀವು ಚೆಕ್ಕಿನಲ್ಲಿ ನಮೂದಿಸಿದ ಹಣ ಪಾವತಿಸದೇ ಲಿಖಿತ ವರ್ಗಾವಣೆಗಳ ಕಾಯ್ದೆ (N.I.Act) ಕಲಂ.138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುವಿ ಅಂತಾ ಆಪಾದಿಸಲಾಗಿದೆ.

ಪ್ರಶ್ನೆ-1) ಈಗ ಓದಿ ಹೇಳಲಾದ ಆರೋಪಣೆ ತಿಳಿಯಿತೆ ?
ಉತ್ತರಃ- ತಿಳಿಯಿತು.

ಪ್ರಶ್ನೆ-2) ಸದರಿ ಆರೋಪಣೆಯನ್ನು ಒಪ್ಪಿ ಕೊಳ್ಳುವಿರೋ ಅಥವಾ ವಿಚಾರಣೆ ಆಗಲು ಬಯಸುವಿರೊ ?
ಉತ್ತರಃ- ಸುಳ್ಳು ವಿಚಾರಣೆಯಾಗಬೇಕು.

ಮೇಲೆ ಹೇಳಲಾದ ಆರೋಪಣೆಯನ್ನು ಆರೋಪಿತರಿಗೆ ತಿಳಿಯುವ ಭಾಷೆಯಲ್ಲಿ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಬರೆದುಕೊಳ್ಳಲಾಯಿತು ಎಂದು ದೃಢೀಕರಿಸಲಾಗಿದೆ.

ಸಹಿ/-

ಸ್ಥಳಃ ಬನಹಟ್ಟಿ
ದಿನಾಂಕ ಃ 24-11-2023

ಪ್ರ.ದ.ನ್ಯಾ. ದಂಡಾಧಿಕಾರಿಗಳು,
ಬನಹಟ್ಟಿ.